# ಅನುಬಂಧ-2

**ಆದೇಶ ಸಂಖ್ಯೆ: ಕೃಇ/61/ಕೃಉಇ/2013. ದಿನಾಂಕ: 31-1-2014**

## ಕರ್ತವ್ಯಗಳು (Duties)

1. ನಿಯಮಿತವಾಗಿ ಮತ್ತು ವ್ಯವಸ್ಥಿತವಾಗಿ ಸ್ಥಳೀಯ ಬೇಡಿಕೆ, ಪರಿಕರಗಳ ಸರಬರಾಜು, ಹುಟ್ಟುವಳಿ ಪ್ರತಿಬಿಂಬಿಸುವ ಪ್ರಾಮಾಣಿತ ಬೆಲೆ ಪರಿಕಲ್ಪನೆಗಳನ್ನು ಬಳಸಿಕೊಂಡು ತೋಟಗಾರಿಕಾ ಬೆಳೆಗಳು ಸೇರಿದಂತೆ ರಾಜ್ಯದ ಪ್ರಮುಖ ಕೃಷಿ ಬೆಳೆಗಳ ಸಾಗುವಳಿ ವೆಚ್ಚ ಅಂದಾಜಿಸುವುದು.

2. ನಿಯತಕಾಲಿಕವಾಗಿ ರಾಜ್ಯ ಸರ್ಕಾರದಿಂದ ಮಧ್ಯಸ್ಥಿಕೆ ವಹಿಸಬೇಕಾಗಿರುವ ಬೆಳೆಗಳನ್ನು ಗುರುತಿಸುವುದು. ಪ್ರಾರಂಭಿಕವಾಗಿ ರಾಗಿ, ಜೋಳ, ಸಜ್ಜೆ, ಕಿರುಧಾನ್ಯಗಳು, ತೊಗರಿ, ನೆಲಗಡಲೆ, ಆಲೂಗಡ್ಡೆ, ಟೊಮೆಟೊ ಮತ್ತು ಈರುಳ್ಳಿ ಬೆಳೆಗಳನ್ನು ಪರಿಗಣಿಸುವುದು. ಇತರೆ ಬೆಳೆಗಳನ್ನು ಸೇರ್ಪಡೆ ಮಾಡುವುದರ ಬಗ್ಗೆ ಸಮಿತಿಯು ಕಾಲಕಾಲಕ್ಕೆ ಸರ್ಕಾರವು ಗುರುತಿಸಿ ಸೂಚಿಸಿದಂತೆ ಕ್ರಮ ಕೈಗೊಳ್ಳುವುದು.

3. ಕೃಷಿ ಉತ್ಪನ್ನಗಳಿಗೆ ಸಂಭವನೀಯ ಬೆಲೆ ನೀಡಲು, ಬೆಳೆಗಳ ಉತ್ಪಾದಕತೆ, ಉತ್ಪಾದನೆ, ಆವರಿಸಿದ ವಿಸ್ತೀರ್ಣ ಮತ್ತು ಮುಂಗಡ ಬೆಲೆ, ಸರಬರಾಜು ಮತ್ತು ಬೇಡಿಕೆ ಬಗ್ಗೆ ವಿಶ್ಲೇಷಣೆ ಮಾಡುವುದು.

4. ರೈತರ ಮತ್ತು ಗ್ರಾಹಕರ ಹಿತಾಸಕ್ತಿಯನ್ನು ಗಮನಿಸಿ ಪ್ರಮುಖ ಕೃಷಿ ಉತ್ಪನ್ನಗಳ ಲಾಭದಾಯಕ ಬೆಲೆಗಳನ್ನು ಕನಿಷ್ಟ ಬಿತ್ತನೆಗೆ 2 ತಿಂಗಳ ಮುಂಚೆ ಶಿಫಾರಸ್ಸು ಮಾಡುವುದು.

5. ಕೃಷಿ ಮತ್ತು ತೋಟಗಾರಿಕೆ ಪದಾರ್ಥಗಳ ವೆಚ್ಚಗಳು, ಬೆಲೆ ಮತ್ತು ಮಾರುಕಟ್ಟೆ ವ್ಯಾಪಾರ ಇತ್ಯಾದಿ ಅಂಶಗಳ ಗುಣಮಟ್ಟ ಮತ್ತು ವಿಶ್ವಾಸಾರ್ಹವಾದ ಸಂಶೋಧನೆ ಬಗ್ಗೆ ಮಾಹಿತಿ ಸಂಗ್ರಹಣೆ, ವಿಶ್ಲೇಷಣೆ ಮಾಡುವುದು.

6. ಕೃಷಿ ಮತ್ತು ತೋಟಗಾರಿಕೆಗೆ ಸಂಬಂಧಪಟ್ಟಂತೆ, ಉತ್ಪಾದನೆ, ಮಾರುಕಟ್ಟೆ, ಬೆಲೆ ಹಾಗೂ ವ್ಯಾಪಾರದ ಬಗ್ಗೆ ಅಧ್ಯಯನ, ವರದಿಗಳನ್ನು ಪ್ರಕಟಿಸುವುದು ಮತ್ತು ಬೆಲೆ ಏರಿಳಿತ, ಮಾರುಕಟ್ಟೆಯ ಅಪಾಯಗಳು, ಹೆಚ್ಚಿನ ವೆಚ್ಚಗಳು ಮತ್ತು ಇತರ ಸಂಬಂಧಿಸಿದ ಸಮಸ್ಯೆಗಳನ್ನು ಬಗೆಹರಿಸಲು, ಸಂಶೋಧಕರು, ತಜ್ಞರು, ಮಾರುಕಟ್ಟೆ ವೃತ್ತಿಪರರು ಮತ್ತು ಸಲಹೆಗಾರರನ್ನು ತೊಡಗಿಸಿಕೊಂಡು ಕಾರ್ಯಗಾರ/ವಿಚಾರ ಸಂಕೀರ್ಣ, ಸಮಾಲೋಚನೆಗಳನ್ನು ಏರ್ಪಡಿಸುವುದು.

7. ಪ್ರಾಯೋಗಿಕ ಯೋಜನೆಯ ಆಧಾರದ ಮೇರೆಗೆ ಸಾಮೂಹಿಕ ಮತ್ತು ಗುಂಪು ಮಾರಾಟಗಾರಿಕೆ ಉಪಕ್ರಮಗಳು, ಮಧ್ಯವರ್ತಿಗಳಿಂದ ಉಂಟಾಗುವ ಶೋಷಣೆಯನ್ನು ತಪ್ಪಿಸುವುದು ಮತ್ತು ಆಹಾರ ಭದ್ರತೆ ಧ್ಯೇಯಗಳನ್ನು ಗಮನದಲ್ಲಿರಿಸಿಕೊಂಡು ಆಹಾರ ಧಾನ್ಯಗಳ ಉತ್ಪಾದಕತೆಯನ್ನು ಹೆಚ್ಚಿಸಲು ಪೂರಕ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ.

8. ಆಧುನಿಕ ಮಾರುಕಟ್ಟೆ, ವಿದ್ಯುನ್ಮಾನ ವ್ಯಾಪಾರ, ಭವಿಷ್ಯದ ಮಾರುಕಟ್ಟೆ, ವಾಣಿಜ್ಯ ಬೆಳೆಗಳ ಆಧುನಿಕ ವ್ಯಾಪಾರೋದ್ಯಮದ ಪ್ರಯೋಜನೆಗಳನ್ನು ಪಡೆಯಲು ವಿಶೇಷ ಸರಕು ಮಾರುಕಟ್ಟೆಗಳ ಬಗ್ಗೆ ಸಲಹೆ ನೀಡುವುದು.

9. ರೈತರಿಗೆ ಮಾಹಿತಿ ಒದಗಿಸಲು ಮತ್ತು ಬೆಳೆ ಉತ್ಪಾದನೆ, ಮಾರುಕಟ್ಟೆ ಮತ್ತು ಸ್ಥಳೀಯ ಕಾಲೋಚಿತ ಮಾಹಿತಿ ಆಧರಿಸಿ ವಿವಿಧ ಮಾರುಕಟ್ಟೆಗಳಲ್ಲಿ ಬೆಲೆಗಳ ಬಗ್ಗೆ ರೈತರಿಗೆ ಮಾಹಿತಿಗಾಗಿ ನಿಯಮಿತವಾಗಿ ಪೋರ್ಟಲ್ ನವೀಕರಣಕ್ಕಾಗಿ ಒಂದು ವಿಶೇಷ ತಾಂತ್ರಿಕ ಕೋಶ ರೂಪಿಸಲು ಕೃಷಿ ಪೋರ್ಟಲ್ ಅಭಿವೃದ್ಧಿ ಪಡಿಸುವುದು.

10. ಮಾರುಕಟ್ಟೆಯಲ್ಲಿ ಬೆಲೆಯನ್ನು ಅಧ್ಯಯನ ಮಾಡಿ ಮಾರುಕಟ್ಟೆ ಬೆಲೆ ಏರುಪೇರಾದಾಗ ಯಾವ ರೀತಿ